(18)

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಚಿದಾನಂದ ಎಂ ಗೌಡ.. ಇವರು ನಿಯಮ-72ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ.

**ವಿಷಯ**

2011ರಲ್ಲಿ ಸರ್ಕಾರವು ಪದವಿ ಪೂರ್ವ ವೃತ್ತಿ ಶಿಕ್ಷಣ ಇಲಾಖೆ ಜೆ.ಓ.ಸಿ ಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ನೌಕರರಲ್ಲಿ ಕೇವಲ 3746 ಸಿಬ್ಬಂದಿಗಳನ್ನು ಅವರ ವಿದ್ಯಾರ್ಹತೆ ಅನುಗುಣವಾಗಿ ಸರ್ಕಾರದ ವಿವಿಧ ಇಲಾಖೆಗಳಿಗೆ ಖಾಲಿಯಿರುವ ಹುದ್ದೆಗಳಿಗೆ ವಿಲೀನಗೊಳಿಸಿದ್ದು. ಅದರ ಅದೇ ಸಂದರ್ಭದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಉಳಿದ 530 ಜೆ.ಓ.ಸಿ ಸಿಬ್ಬಂದಿಗಳನ್ನು ವಿಲೀನಗೊಳಿಸುವ ಕುರಿತು.

**ಉತ್ತರ**

ಜೆ.ಓ.ಸಿ. ವಿಲೀನ ವಿಧೇಯಕ ದಿನಾಂಕ:06.04.2011ರ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 22 ಶಾಸನ 2011ರಲ್ಲಿನ ನಿಯಮ 3(1)(ಎ)ರಲ್ಲಿ ಯಾವೊಬ್ಬ, ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರನನ್ನು ಆತನಿಗೆ ನೇರವಾಗಿ ಅನ್ವಯಿಸಬಹುದಾದಂಥ ಕಾರಣಗಳಿಗಾಗಿ ಆತನು ಯಾವುದೇ ಸೇವಾಭಂಗವಿಲ್ಲದೆ ಐದು ವರ್ಷಗಳಿಗೆ ಕಡಿಮೆ ಇಲ್ಲದಂತೆ ನಿರಂತರವಾಗಿ ಕರ್ತವ್ಯ ನಿರ್ವಹಿಸಿದ್ದ ಹೊರತು ವಿಲೀನಗೊಳಿಸತಕ್ಕದ್ದಲ್ಲ ಎಂದು ತಿಳಿಸಲಾಗಿದೆ. ಅದರಂತೆ, ದಿನಾಂಕ:06.04.2011ಕ್ಕೆ ಯಾವುದೇ ಸೇವಾಭಂಗವಿಲ್ಲದೆ ಐದು ವರ್ಷಗಳಿಗೆ ಕಡಿಮೆ ಇಲ್ಲದಂತೆ ನಿರಂತರವಾಗಿ ಕರ್ತವ್ಯ ನಿರ್ವಹಿಸಿದವರನ್ನು ಮಾತ್ರ ವಿಲೀನಕ್ಕೆ ಪರಿಗಣಿಸಲಾಗಿದೆ.

ಜೆ.ಓ.ಸಿ. ವಿಲೀನ ವಿಧೇಯಕ ದಿನಾಂಕ:06.04.2011ರ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 22 ಶಾಸನ 2011ರಲ್ಲಿನ ನಿಯಮ 6(1)ರಲ್ಲಿ ಈ ಅಧಿನಿಯಮ ಆರಂಭವಾದ ದಿನಾಂಕದಂದು ಐದು ವರ್ಷಗಳ ಸೇವೆಯನ್ನು ಪೂರ್ಣಗೊಳಿಸದ ಅರೆಕಾಲಿಕ ವೃತ್ತಿ ಶಿಕ್ಷಣ ಆಧಾರಿತ ಕೋರ್ಸುಗಳ ನೌಕರರನ್ನು ಯಾವುದೇ ಸರ್ಕಾರಿ ಸೇವೆಯಲ್ಲಿ ಅಥವಾ ಯಾವುದೇ ಖಾಸಗಿ ಅನುದಾನಿತ ಸಂಸ್ಥೆಯಲ್ಲಿ ಮುಂದುವರೆಸತಕ್ಕದ್ದಲ್ಲ ಅಥವಾ ವಿಲೀನಗೊಳಿಸತಕ್ಕದ್ದಲ್ಲ ಎಂದು ತಿಳಿಸಲಾಗಿದೆ. ಆದ್ದರಿಂದ, ದಿನಾಂಕ:06.04.2011ಕ್ಕೆ ನಿರಂತರವಾಗಿ ಐದು ವರ್ಷ ಪೂರೈಸದ 530 ಜೆ.ಓ.ಸಿ ಬೋಧಕ ಮತ್ತು ಬೋಧಕೇತರರನ್ನು ವಿಲೀನಕ್ಕೆ ಪರಿಗಣಿಸಲು ಅವಕಾಶವಿರುವುದಿಲ್ಲ.

ಸಂಖ್ಯೆ:ಇಪಿ 38 ಟಿವಿಇ 2021

(ಬಿ.ಸಿ.ನಾಗೇಶ್)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ

ಹಾಗೂ ಸಕಾಲ ಸಚಿವರು